# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕಿನ ಹಾಬಲಟ್ಟಿ ಗ್ರಾಮ ಪಂಚಾಯತಿಯ ಚಿಕ್ಕಗೊಣ್ಣಗರ ಮತ್ತು ವಾರಿಕಲ್ ಗ್ರಾಮಗಳನ್ನು ಹಿರೇಗೊಣ್ಣಗರ ಗ್ರಾಮ ಪಂಚಾಯತಿಗೆ ಸೇರ್ಪಡೆಗೊಳಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶದ ಸಂಖ್ಯೆ ಗ್ರಾಅಪ 10 ಗ್ರಾಪಂಅ 2015, ಬೆಂಗಳೂರು, ದಿನಾಂಕ 09.01.2015.
2. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ ಇವರ ಪತ್ರ ಸಂಖ್ಯೆ ನಂ.ಕಂದಾಯ: ಚುನಾವಣೆ:39:2015–16, ದಿನಾಂಕ: 31.05.2016.

**ಪ್ರಸ್ತಾವನೆ :**

ಮೇಲೆ ಓದಲಾದ (1) ರಲ್ಲಿ ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕಿನಲ್ಲಿ ಹಾಬಲಟ್ಟಿ ಗ್ರಾಮ ಪಂಚಾಯತಿಯನ್ನು ಹೊಸದಾಗಿ ಸ್ಥಾಪಿಸಿ, ಸದರಿ ಗ್ರಾಮ ಪಂಚಾಯತಿಗೆ ಹಾಬಲಕಟ್ಟಿ, ವಾರಿಕಲ್, ಚಿಕ್ಕಗೊಣ್ಣಗರ, ಮಾಸ್ತಿಕಟ್ಟೆ ಹಾಗೂ ಗಡಚಿಂತಿ ಗ್ರಾಮಗಳನ್ನು ಸೇರ್ಪಡೆ ಮಾಡಿ ಆದೇಶ ಹೊರಡಿಸಲಾಗಿತ್ತು.

ಮೇಲೆ ಓದಲಾದ (2) ರಲ್ಲಿ ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ ಇವರು ಹಿರೇಗೊಣ್ಣಗರ ಗ್ರಾಮ ಪಂಚಾಯತಿಯಲ್ಲಿ 2011 ರ ಜನಗಣತಿಯ ಪ್ರಕಾರ ಒಟ್ಟು ಜನಸಂಖ್ಯೆಯು 5555 ಆಗಿರುತ್ತದೆ ಹಾಗೂ ಹಾಬಲಟ್ಟಿ ಗ್ರಾಮ ಪಂಚಾಯತಿಯಲ್ಲಿ ಜನಸಂಖ್ಯೆಯು 4811 ಆಗಿರುತ್ತದೆ ಎಂದು ತಿಳಿಸಿದ್ದಾರೆ. ಚಿಕ್ಕಗೊಣ್ಣಗರ ಹಾಗೂ ವಾರಿಕಲ್ ಗ್ರಾಮಗಳು ಈ ಹಿಂದೆ ಇದ್ದ ಹಿರೇಗೊಣ್ಣಗರ ಗ್ರಾಮ ಪಂಚಾಯತಿಯಿಂದ 0.5 ಕಿ.ಮೀ. ಅಂತರದಲ್ಲಿ ಇದ್ದು, ಹಾಲಿ ಹಾಬಲಕಟ್ಟಿ ಗ್ರಾಮ ಪಂಚಾಯತಿಗೆ 5.0 ಕಿ.ಮೀ. ಅಂತರದಲ್ಲಿರುವುದಾಗಿ ತಿಳಿಸಿದ್ದಾರೆ. ಚಿಕ್ಕಗೊಣ್ಣಗರ ಮತ್ತು ವಾರಿಕಲ್ ಗ್ರಾಮಸ್ಥರು ಗ್ರಾಮ ಪಂಚಾಯತಿಯಲ್ಲಿ ತಮ್ಮ ದೈನಂದಿನ ಕೆಲಸ ಕಾರ್ಯಗಳಿಗೆ ಸಂಚರಿಸಲು ಭೌಗೋಳಿಕವಾಗಿ ಕೇವಲ 0.5 ಕಿ.ಮೀ. ದೂರವಿರುವ ಹಿರೇಗೊಣ್ಣಗರ ಗ್ರಾಮ ಪಂಚಾಯತಿಗೆ ಸೇರ್ಪಡೆ ಮಾಡಲು ಮನವಿ ಸಲ್ಲಿಸಿದ್ದಾರೆಂದು ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಹಾಬಲಟ್ಟಿ ಗ್ರಾಮ ಪಂಚಾಯತಿಯ ಚಿಕ್ಕಗೊಣ್ಣಗರ ಹಾಗೂ ವಾರಿಕಲ್ ಗ್ರಾಮಗಳನ್ನು, ಸಾರ್ವಜನಿಕರು ಗ್ರಾಮ ಪಂಚಾಯತಿಯಲ್ಲಿ ತಮ್ಮ ಕೆಲಸ ಕಾರ್ಯಗಳಿಗೆ ಸಂಚರಿಸಲು ಹತ್ತಿರವಿರುವುದರಿಂದ ಮತ್ತು ಆಡಳಿತಾತ್ಮಕ ಕಾರಣಗಳಿಂದಾಗಿ ಹಿರೇಗೊಣ್ಣಗರ ಗ್ರಾಮ ಪಂಚಾಯತಿಗೆ ಸೇರ್ಪಡೆ ಮಾಡಬೇಕಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಎ) ರನ್ವಯ, ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಮತ್ತು ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ವಿನಂತಿ ಮೇರೆಗೆ ಅಥವಾ ಅನ್ಯಥಾ ಮತ್ತು ಅಧಿಸೂಚನೆಯ ಮೂಲಕ ಪ್ರಸ್ತಾಪವನ್ನು ಮೊದಲೇ ಪ್ರಕಟಿಸಿದ ತರುವಾಯ, ಯಾವುದೇ ಸಮಯದಲ್ಲಿ, ಯಾವುದೇ ಪಂಚಾಯತಿ ಪ್ರದೇಶವನ್ನು ಅಂಥ ಪಂಚಾಯತಿ ಪ್ರದೇಶದೊಳಗೆ ಯಾವುದೇ ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಸೇರಿಸುವ ಮೂಲಕ ಹೆಚ್ಚಿಸಲು ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. ಆದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಎ) ರನ್ವಯ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಹಾಬಲಟ್ಟಿ ಗ್ರಾಮ ಪಂಚಾಯತಿಯ ಚಿಕ್ಕಗೊಣ್ಣಗರ ಹಾಗೂ ವಾರಿಕಲ್ ಗ್ರಾಮಗಳನ್ನು, ಹಾಬಲಟ್ಟಿ ಗ್ರಾಮ ಪಂಚಾಯತಿಯಿಂದ ಹಿರೇಗೊಣ್ಣಗರ ಗ್ರಾಮ ಪಂಚಾಯತಿಗೆ ಸೇರ್ಪಡೆಗೊಳಿಸಬಹುದಾಗಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 1114 ಗ್ರಾಪಂಅ 2016,**
**ಬೆಂಗಳೂರು, ದಿನಾಂಕ: 21.01.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಎ) ರನ್ವಯ ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕಿನ ಹಾಬಲಟ್ಟಿ ಗ್ರಾಮ ಪಂಚಾಯತಿಯ ಚಿಕ್ಕಗೊಣ್ಣಗರ ಹಾಗೂ ವಾರಿಕಲ್ ಗ್ರಾಮಗಳನ್ನು, ಹಾಬಲಟ್ಟಿ ಗ್ರಾಮ ಪಂಚಾಯತಿಯಿಂದ ಹಿರೇಗೊಣ್ಣಗರ ಗ್ರಾಮ ಪಂಚಾಯತಿಗೆ ಸೇರ್ಪಡೆಗೊಳಿಸಿ ಸರ್ಕಾರ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
4. ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಯಲಬುರ್ಗ ತಾಲ್ಲೂಕು, ಕೊಪ್ಪಳ ಜಿಲ್ಲೆ.
6. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
7. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಾಬಲಟ್ಟಿ ಗ್ರಾಮ ಪಂಚಾಯತಿ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ.
8. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಗೊಣ್ಣಗರ ಗ್ರಾಮ ಪಂಚಾಯತಿ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
5. ಗಣಕ ಕೋಶ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.